# ಹಿರಿಯ ಶ್ರೇಣಿ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.

**CC No.580/2022**

**PW-5 CW-5**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ರಾಚಪ್ಪ ತಂದೆ ದೇವಿಂದ್ರಪ್ಪ |
| ವಯಸ್ಸು | ಃ | 38 ವರ್ಷ |
| ಉದ್ಯೋಗ | ಃ | ಗ್ರಾಮ ಸಹಾಯಕ |
| ವಾಸಸ್ಥಳ | ಃ | ಕಮಲದಿನ್ನಿ |
| ಪ್ರಮಾಣೀಕರಿಸಿದ ದಿನಾಂಕ | ಃ | 15-11-2024 |

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದ.**

ಆರೋಪಿತರು ಸರಕಾರಿ ಜಮೀನು ಅತೀಕ್ರಮಣ ಮಾಡಿ ಸಾಗುವಳಿ ಮಾಡಿರುತ್ತಾರೆ. ಅವರ ಜಮೀನನ್ನು ತೆರವುಗೊಳಿಸಲು ತಹಸೀಲ್ದಾರ ಮತ್ತು ಆರ್ಐ ರವರು 25-06-2022 ರಿಂದ 01-07-2022 ರ ವೆರೆಗೆ ಕಾಲಾವಕಾಶ ಕೊಟ್ಟರೂ ಆರೋಪಿತರು ಜಮೀನು ತೆರವುಗೊಳಿಸಿರುವುದಿಲ್ಲ. ಅತೀಕ್ರಮಣದಾರರನ್ನು ನಾನು ಗುರುತಿಸಿರುತ್ತೇನೆ ಎಂದು ದಿನಾಂಕ 05-07-2022 ರಂದು ಪೊಲೀಸರಿಗೆ ನಿಪಿ-4 ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.**

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.